ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—

ಅ) ಇದರ ಬಗ್ಗೆ ಭಾರತ ಚುನಾವಣಾ ಆಯೋಗ ತೀರ್ಮಾನ ತೆಗೆದುಕೊಳ್ಳಬೇಕಾಗಿದೆ.

ಆ) ಚುನಾವಣಾ ಆಯೋಗದಿಂದ ಆದೇಶ ಬಂದ ನಂತರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಚಿತ್ರ ಕಲಾ ವಿದ್ಯಾರ್ಥಿಗಳಿಗೆ ಬಸ್ ಪಾಸ್ ನೀಡುವ ಬಗ್ಗೆ

೬೦ (೨೭೭) ಶ್ರೀ ಎಂ. ಎಸ್. ಕೃಷ್ಣನ್ (ರಾಜಾಜಿನಗರ).—ಮಾನ್ಯ ಸಾರಿಗೆ ಸಣ್ಣ ಉಳಿತಾಯ ಮತ್ತು ಬಂಧೀಖಾನೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ರಾಜ್ಯದಲ್ಲಿ ಇತರೆ ವಿದ್ಯಾರ್ಥಿಗಳಿಗೆ ಕೊಟ್ಟಿರುವಂತಹ ಬಸ್ ಪಾಸ್ ಸವಲತ್ತನ್ನು ಚಿತ್ರ ಕಲಾ ವಿದ್ಯಾರ್ಥಿಗಳಿಗೆ ಕೊಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ರಾಜ್ಯದ ೨೪ ಚಿತ್ರಕಲಾ ಶಾಲೆಗಳಲ್ಲಿನ ಸುಮಾರು ೨.೦೦೦ ವಿದ್ಯಾರ್ಥಿಗಳಿಗೆ ಇದರಿಂದ ತೀರ ಅನುಕೂಲವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಈ ವಿದ್ಯಾರ್ಥಿಗಳಿಗೆ ಇತರರಂತೆ ರಿಯಾಯಿತಿ ಬಸ್ ಪಾಸ್‌ಗಳನ್ನು ಕೊಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ವೀರಣ್ಣ (ಸಾರಿಗೆ, ಸಣ್ಣ ಉಳಿತಾಯ ಮತ್ತು ಬಂಧೀಖಾನೆ ಮಂತ್ರಿಗಳು).—

ಅ) ಹೌದು.

ಆ) ಮನವಿಗಳು ಬಂದಿರುತ್ತವೆ.

ಇ) ಉದ್ಯೋಗದಲ್ಲಿ ಇಲ್ಲದೇ ಕ್ರಮವಾಗಿ ಅಧ್ಯಯನ ಮಾಡುವ ವಿದ್ಯಾರ್ಥಿಗಳಿಗೆ ರಿಯಾಯಿತಿ ದರದಲ್ಲಿ ಬಸ್ ಪಾಸುಗಳನ್ನು ಕೊಡಲಾಗುವುದು.

ಚೋಳನಾಯಕನಹಳ್ಳಿಗೆ ನಗರ ಸಾರಿಗೆ ಬಸ್ಸುಗಳನ್ನು ಓಡಿಸುವ ಬಗ್ಗೆ

೬೧ (೧೩೦) ಶ್ರೀ ಎಂ. ಎಸ್. ಕೃಷ್ಣನ್ (ರಾಜಾಜಿನಗರ).—ಮಾನ್ಯ ಸಾರಿಗೆ ಸಣ್ಣ ಉಳಿತಾಯ ಮತ್ತು ಬಂಧೀಖಾನೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಬೆಂಗಳೂರು ಹೊರವಲಯದ (ಉತ್ತರ ತಾಲ್ಲೂಕು) ಚೋಳನಾಯಕನಹಳ್ಳಿಗೆ ನಗರ ಸಾರಿಗೆ ವಾಹನಗಳನ್ನು ಓಡಿಸಲು ಮಾನ್ಯ ಸಚಿವರು ಹಾಗೂ ನಗರ ಸಾರಿಗೆ ಸಂಸ್ಥೆಯ ಅಧ್ಯಕ್ಷರು ಒಪ್ಪಿದ್ದಾರು ನಿಜವೇ?

ಆ) ಹಾಗಿದ್ದಲ್ಲಿ, ಇದುವರೆವಿಗೂ ನಗರ ಸಾರಿಗೆ ವಾಹನಗಳನ್ನು ಓಡಿಸದೇ ಇರುವುದಕ್ಕೆ ಕಾರಣಗಳೇನು?

ಇ) ಸದರಿ ಪಳ್ಳಿಗೆ ನಗರ ಸಾರಿಗೆ ವಾಹನಗಳನ್ನು ಓಡಿಸಲು ಸರ್ಕಾರದವರು ತೀವ್ರ ಕ್ರಮ ಕೈಗೊಳ್ಳುವರೇ ?

ಶ್ರೀ ವೀರಣ್ಣ (ಸಾರಿಗೆ, ಸಣ್ಣ ಉಳಿತಾಯ ಮತ್ತು ಬಂಧೀಖಾನೆ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ. ಚೋಳನಾಯಕನಹಳ್ಳಿಯ ಸಂಪರ್ಕ ರಸ್ತೆಯು ಬಹಳ ಕಿರಿದಾಗಿರುತ್ತದೆ. ಈ ರಸ್ತೆಯಲ್ಲಿ ಭಾರಿ ಸಾರಿಗೆ ವಾಹನಗಳನ್ನು ಸುರಕ್ಷಿತವಾಗಿ ಚಲಿಸಲು ಸಾಧ್ಯವಾಗುವುದಿಲ್ಲ.

ಇ) ಸಂಪರ್ಕ ರಸ್ತೆಯನ್ನು ವಿಸ್ತರಿಸಿದ ನಂತರ ಸಾರಿಗೆ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ಪರಿಶೀಲಿಸಲಾಗುವುದು.